**ಕರ್ನಾಟಕ ಸರ್ಕಾರ**

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ**

**ಕೇಂದ್ರೀಕೃತ ದಾಖಲಾತಿ ಘಟಕ, ಕೆ.ಜಿ ರಸ್ತೆ, ಬೆಂಗಳೂರು-09**

**ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅಭ್ಯರ್ಥಿಗಳಿಗೆ ವಿಶೇಷ ಸೂಚನೆಗಳು**

.

ಸರ್ಕಾರದ ಅಧಿಸೂಚನೆ ಇ.ಪಿ. 89 ಪಿಬಿಎಸ್ 2021 (ಭಾಗ-1) ದಿ:22-02-2022 ವಿಶೇಷ ವೃಂದ ಮತ್ತು ನೇಮಕಾತಿ ನಿಯಮಗಳ ಅನ್ವಯ ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿ (6 ರಿಂದ 8 ನೇ ತರಗತಿ) – 2022 ರ ಸಂಬಂಧ ದಿನಾಂಕ: 21/03/2022 ರಂದು ಇಲಾಖಾ ವೆಬ್ ಸೈಟ್‌ನಲ್ಲಿ ಹೊರಡಿಸಲಾದ ನೇಮಕಾತಿ ಅಧಿಸೂಚನೆಯಲ್ಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸ ಬಯಸುವ ಅಭ್ಯರ್ಥಿಗಳಿಗೆ ಅರ್ಜಿ ಭರ್ತಿ ಮಾಡುವ ಸಂಬಂಧ ವಿಶೇಷ ಸೂಚನೆಗಳು

1. **ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಭರ್ತಿ ಮಾಡುವ ಮುನ್ನ ನೇಮಕಾತಿ ಅಧಿಸೂಚನೆಗಳನ್ನು, ಸಾಮಾನ್ಯ ಸೂಚನೆಗಳು, ಪ್ರಮುಖ ಸೂಚನೆಗಳನ್ನು ಓದಿ ಮನದಟ್ಟು ಮಾಡಿಕೊಂಡು ಅಧಿಸೂಚನೆಯಲ್ಲಿರುವಂತೆ ಶೈಕ್ಷಣಿಕ ವಿದ್ಯಾರ್ಹತೆ, ವಯೋಮಿತಿ, ಶುಲ್ಕ, ಮೀಸಲಾತಿ ಮತ್ತಿತರ ವಿವರಗಳನ್ನು ಖಚಿತಪಡಿಸಿಕೊಂಡು ತಪ್ಪಿಲ್ಲದೆ ಆನ್‌ಲೈನ್ ಅರ್ಜಿ ಭರ್ತಿ ಮಾಡುವುದು.**
2. ಈ ಅರ್ಜಿ ಸಲ್ಲಿಸುವ ಪ್ರಕ್ರಿಯೆಯು ಒಂದು ಬಾರಿಯ ನೋಂದಣಿ ಪ್ರಕ್ರಿಯೆಯನ್ನು ಒಳಗೊಂಡಿದ್ದು, ಅಭ್ಯರ್ಥಿಗಳು ನೀಡಿರುವ ಮಾಹಿತಿಯನ್ನು ಮುಂದಿನ ಎಲ್ಲಾ ನೇಮಕಾತಿಯ ಪ್ರಕ್ರಿಯೆಗಳಲ್ಲಿ ಪರಿಗಣಿಸಲಾಗುವುದರಿಂದ ಅತಿ ಜಾಗರೂಕತೆಯಿಂದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಬೇಕಾಗಿದೆ.
3. ಅರ್ಜಿ ಸಲ್ಲಿಸಲು ಅಭ್ಯರ್ಥಿಗಳು ಮೊದಲು ಇಲಾಖಾ ವೆಬ್ ಸೈಟ್ www.schooleducation.kar.nic.in ನಲ್ಲಿ " Online Application for Recruitment of Graduate Primary Teachers for 6th to 8th Classes -2022" ಎಂಬ ಲಿಂಕ್ ಅನ್ನು Click ಮಾಡಬೇಕು. ನಂತರ 'New User ಎಂಬ ಬಟನ್ ಒತ್ತಿ ನೋಂದಣಿ (Registration) ಮಾಡಿಕೊಳ್ಳಬೇಕು.
4. Login ರುಜುವಾತುಗಳನ್ನು ಸೃಷ್ಟಿಸಿದ ನಂತರ ಅಭ್ಯರ್ಥಿಗಳು USER Name, Password ನಮೂದಿಸಿ Login ಆಗಬೇಕು. ಅಭ್ಯರ್ಥಿಗಳು ಮುಂದಿನ ಹಂತಗಳಲ್ಲಿ ವೈಯಕ್ತಿಕ ವಿವರ , ಮೀಸಲಾತಿ ವಿವರ, ವೃತ್ತಿಪರ ಶಿಕ್ಷಣ ವಿದ್ಯಾರ್ಹತೆ ವಿವರ, ಶಿಕ್ಷಕರ ಅರ್ಹತಾ ಪರೀಕ್ಷೆ ವಿವರ ಅರ್ಜಿ ಸಲ್ಲಿಸುತ್ತಿರುವ ಹುದ್ದೆಗಳ ವಿವರಗಳನ್ನು ತುಂಬಬೇಕಾಗುತ್ತದೆ.
5. ಅಭ್ಯರ್ಥಿಗಳು ಅರ್ಜಿಗಳನ್ನು ONLINE ಮೂಲಕವೇ ಸಲ್ಲಿಸಬೇಕು. ಇತರೆ ಯಾವುದೇ ನಮೂನೆಯಲ್ಲಾಗಲಿ ಅಥವಾ ಬೆರಳಚ್ಚು/ಫೋಟೋ ಪ್ರತಿ ಮಾಡಿರುವ, ಕೈ ಬರಹದಿಂದ ಬರೆದಿರುವ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ ಮತ್ತು ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## ಆನ್ ಲೈನ್ ಅರ್ಜಿ ಸಲ್ಲಿಕೆಯ ವಿವಿಧ ಹಂತಗಳು (Flow Chart)

**ನೋಂದಣಿ ಮತ್ತು ಲಾಗಿನ್ (User name and Password ಬಳಸಿ)**

↓

**ವೈಯುಕ್ತಿಕ ವಿವರಗಳು**

↓

**ಮೀಸಲಾತಿ ವಿವರಗಳು**

↓

**ಶೈಕ್ಷಣಿಕ ವಿವರಗಳು**

↓

**ವೃತ್ತಿಪರ ಶಿಕ್ಷಣ ವಿದ್ಯಾರ್ಹತೆ ವಿವರಗಳು**

↓

**ಶಿಕ್ಷಕರ ಅರ್ಹತಾ ಪರೀಕ್ಷೆ ವಿವರಗಳು**

↓

**ಅರ್ಜಿ ಸಲ್ಲಿಸಿದ ಹುದ್ದೆಯ ವಿವರಗಳು**

↓

**ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿ**
**(ಭಾವಚಿತ್ರ 50 K.B ಮತ್ತು ಸಹಿ 50 K.B)**

↓

**ಅಭ್ಯರ್ಥಿಯ ಘೋಷಣೆ**

↓

**ಅರ್ಜಿ ಶುಲ್ಕ ಪಾವತಿ**

↓

**ಮೂಲ ಆನ್‌ಲೈನ್ ಅರ್ಜಿಯ ಮುದ್ರಿತ ಪ್ರತಿ**

6. ಅಭ್ಯರ್ಥಿಗಳು ತಮ್ಮ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ, (ಗರಿಷ್ಠ ಅಳತೆ: 50KB) ಮತ್ತು ಸಹಿಯನ್ನು (ಗರಿಷ್ಠ ಅಳತೆ: 50KB) ಸ್ಕ್ಯಾನ್ ಮಾಡಿ ಅರ್ಜಿಯೊಂದಿಗೆ ಅಪ್‌ಲೋಡ್ ಮಾಡುವುದು ಕಡ್ಡಾಯ.

7. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಮೂಲಕ ನೀಡಿರುವ ಮಾಹಿತಿಗಳನ್ನು ಪ್ರತಿ ಹಂತದಲ್ಲಿಯೂ ಕಡ್ಡಾಯವಾಗಿ Submit ಮಾಡುವುದು.

ಪ್ರತಿ ಹಂತದಲ್ಲೂ ಅಗತ್ಯವಿರುವ ಅಧಿಕೃತ ಮಾಹಿತಿಯ ದಾಖಲೆಗಳನ್ನು ಎಚ್ಚರಿಕೆಯಿಂದ ಮೊದಲೇ ಸಿದ್ಧಪಡಿಸಿಟ್ಟುಕೊಂಡು, ಸರಿಯಾದ ಮಾಹಿತಿ ಭರ್ತಿ ಮಾಡಿರುವುದನ್ನು ಖಾತ್ರಿಪಡಿಸಿಕೊಂಡ ನಂತರವೇ ಆನ್‌ಲೈನ್ ಅರ್ಜಿಗಳನ್ನು ಪೂರ್ಣಗೊಳಿಸಿ Submit ಮಾಡುವುದು. ಅಭ್ಯರ್ಥಿಯು ಅಂತಿಮವಾಗಿ Submit ಮಾಡಿ ಘೋಷಣೆ (Declaration) ನೀಡಿದ ನಂತರದಲ್ಲಿ ಅರ್ಜಿಯಲ್ಲಿನ ಯಾವುದೇ ಮಾಹಿತಿಯನ್ನು ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ.

**ಒಂದು ವೇಳೆ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿದ ನಂತರ ತಿದ್ದುಪಡಿ ಮಾಡಲು ಬಯಸಿದ್ದಲ್ಲಿ, ಹೊಸದಾಗಿ ಅರ್ಜಿ ಸಲ್ಲಿಸಿ ನಿಗದಿತ ಶುಲ್ಕವನ್ನು ಪಾವತಿಸತಕ್ಕದ್ದು**

**ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದ ನಂತರ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ.**

8. ಅರ್ಜಿ ಶುಲ್ಕವನ್ನು **"ONLINE" ಮೂಲಕ ಅಂದರೆ** INTERNET BANKING /CREDIT CARD /DEBIT CARD **ಅಥವಾ ಬ್ಯಾಂಕ್ ಚಲನ್ (ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಬ್ಯಾಂಕಿನಲ್ಲಿ ಮಾತ್ರ ಚಲನ್ ಮೂಲಕ ಶುಲ್ಕ ಪಾವತಿಸುವುದು) ಮೂಲಕವೇ ಪಾವತಿಸತಕ್ಕದ್ದು. ಇನ್ಯಾವುದೇ ರೂಪದಲ್ಲಿ ಶುಲ್ಕ ಪಾವತಿಸಲು ಅವಕಾಶವಿರುವುದಿಲ್ಲ.** INTERNET Crash **ಅನ್ನು ತಪ್ಪಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ಕಾಯದೇ ಮುಂಚಿತವಾಗಿ ಅರ್ಜಿ ಸಲ್ಲಿಸುವುದು.** ಒಮ್ಮೆ ಪರೀಕ್ಷಾ ಶುಲ್ಕವನ್ನು ಪಾವತಿಸಿದ ನಂತರ ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ. ಹಾಗೂ ಸದರಿ ಶುಲ್ಕವನ್ನು ಇತರೆ ಯಾವುದೇ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ.

   **ವಿಶೇಷ ಸೂಚನೆ**: ಅರ್ಜಿ ಶುಲ್ಕವನ್ನು ಚಲನ್ ಮೂಲಕ ಪಾವತಿಸುವವರು ಆನ್‌ಲೈನ್ ಚಲನ್ ಅನ್ನು ಡೌನ್‌ಲೋಡ್ ಮಾಡಿಕೊಂಡು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಬ್ಯಾಂಕಿನಲ್ಲಿ ಅರ್ಜಿ ಶುಲ್ಕ ಪಾವತಿಸುವುದು. ಶುಲ್ಕ ಪಾವತಿಸಿದ ನಂತರ ಆನ್‌ಲೈನ್ ಅರ್ಜಿಯಲ್ಲಿ ಚಲನ್ ನಂಬರ್ (ATRN) ತಂತಾನೆ GENERATE ಆಗುತ್ತದೆ. ಚಲನ್ ನಂಬರ್ (ATRN) GENERATE ಆಗಲು 24 ಗಂಟೆಗಳ ಕಾಲಾವಕಾಶ ತೆಗೆದುಕೊಳ್ಳುವುದು. ನಂತರವಷ್ಟೇ ಅರ್ಜಿಯ ಮುದ್ರಿತ ಪ್ರತಿಯನ್ನು ಪಡೆದುಕೊಳ್ಳುವುದು.

9. ಒಮ್ಮೆ ಪಾವತಿಸಿದ ಅರ್ಜಿಯ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ ಹಾಗೂ ಹೊಂದಾಣಿಕೆ ಮಾಡಲಾಗುವುದಿಲ್ಲ.

10. ಅರ್ಜಿಯಲ್ಲಿನ ಮಾಹಿತಿಗಳು ದೋಷಪೂರಿತ ಹಾಗೂ ತಪ್ಪಾಗಿದ್ದಲ್ಲಿ, ಅಭ್ಯರ್ಥಿಗಳೇ ಸಂಪೂರ್ಣವಾಗಿ ಜವಾಬ್ದಾರರಾಗಿರುತ್ತಾರೆ ಹಾಗೂ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

11. ಒಂದಕ್ಕಿಂತ ಹೆಚ್ಚು ಜಿಲ್ಲೆಗಳಲ್ಲಿ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಪ್ರತ್ಯೇಕ ಅರ್ಜಿ ಸಲ್ಲಿಸಬೇಕು. ಆದರೆ ಒಂದೇ ಜಿಲ್ಲೆಯಲ್ಲಿ ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಆಯ್ಕೆ ಬಯಸಿದ್ದಲ್ಲಿ, ಪ್ರತ್ಯೇಕ ಅರ್ಜಿ ಸಲ್ಲಿಸುವ ಅಗತ್ಯವಿರುವುದಿಲ್ಲ., ಆದರೆ ಒಂದೇ ಅರ್ಜಿಯಲ್ಲಿ ಹುದ್ದೆಗಳ ಆದ್ಯತೆಯನ್ನು ನಮೂದಿಸಬೇಕು. ಅಭ್ಯರ್ಥಿಗಳು ಪರೀಕ್ಷೆಗೆ ಹಾಜರಾದ ಜಿಲ್ಲೆಯನ್ನು ಮಾತ್ರ ನೇಮಕಾತಿಗೆ ಪರಿಗಣಿಸಲಾಗುವುದು.

12. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೆ ಕಾಯದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

13. ONLINE ಅರ್ಜಿಯ ಮೂಲಕ ನೀಡಿರುವ ಮಾಹಿತಿಗಳನ್ನೇ ಆಧಾರವಾಗಿಟ್ಟುಕೊಂಡು ಅಭ್ಯರ್ಥಿಗಳ ನೇಮಕಾತಿ ಪ್ರಕ್ರಿಯೆಯನ್ನು ನಡೆಸುವುದರಿಂದ, ಯಾವುದೇ ಹಂತದಲ್ಲಿ ಅಪೂರ್ಣ / ಅಸ್ಪಷ್ಟ / ತಪ್ಪು ಮಾಹಿತಿ ನೀಡಿದಲ್ಲಿ ಅಭ್ಯರ್ಥಿಗಳೇ ಸಂಪೂರ್ಣ ಹೊಣೆಗಾರರಾಗಿರುತ್ತಾರೆ ಹಾಗೂ ಅಂತಹವರ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು.

ಅರ್ಜಿಯಲ್ಲಿ ನಮೂದಿಸುವ ಮೊಬೈಲ್ ಸಂಖ್ಯೆ ಮತ್ತು ಇ-ಮೇಲ್ ವಿಳಾಸ ಅಭ್ಯರ್ಥಿಯದೇ ಆಗಿರತಕ್ಕದ್ದು, ಅದನ್ನು ನೇಮಕಾತಿ ಪ್ರಕ್ರಿಯೆ ಮುಗಿಯುವ ಮೊದಲು ಬದಲಾವಣೆ ಮಾಡಿದ್ದಲ್ಲಿ ಆಗಬಹುದಾದ ಪರಿಣಾಮಗಳಿಗೆ ಅಭ್ಯರ್ಥಿಗಳೇ ಹೊಣೆಗಾರರಾಗಿರುತ್ತಾರೆ.

14. ONLINE ಅರ್ಜಿಯಲ್ಲಿ ಮೀಸಲಾತಿ ಸೌಲಭ್ಯಕ್ಕಾಗಿ ಇರುವ ಅಂಕಣವನ್ನು, ಮೀಸಲಾತಿ ಬಯಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು. ಅಂಕಣವನ್ನು ಖಾಲಿ ಬಿಟ್ಟಲ್ಲಿ ಅಥವಾ ತಪ್ಪಾಗಿ ನಮೂದಿಸಿದ್ದಲ್ಲಿ ಅದರಿಂದಾಗುವ ತೊಂದರೆಗಳಿಗೆ ಅಭ್ಯರ್ಥಿಗಳೇ ನೇರ ಹೊಣೆಗಾರರಾಗಿರುತ್ತಾರೆ. ನಂತರ ಯಾವುದೇ ಹಂತದಲ್ಲಿ ಮೀಸಲಾತಿಯನ್ನು ಸೇರ್ಪಡೆ/ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ.

15. ಶುಲ್ಕ ಪಾವತಿಸಿದ ಕೂಡಲೇ ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯ ಮುದ್ರಿತ ಮೂಲ ಪ್ರತಿಯನ್ನು ಪಡೆದುಕೊಂಡು ಮುಂದಿನ ಉಪಯೋಗಕ್ಕಾಗಿ ಸಂರಕ್ಷಿಸಿ ಇಟ್ಟುಕೊಳ್ಳುವುದು.

16. ಮುದ್ರಿತ ಅರ್ಜಿಯು ಒಂದು ವೇಳೆ ಕಳೆದು ಹೋದಲ್ಲಿ ಮೇಲೆ ತಿಳಿಸಿದ ವೆಬ್‌ಸೈಟ್‌ನಲ್ಲಿ ನಿಮ್ಮ User ID and Password ಗಳನ್ನು ಭರ್ತಿ ಮಾಡಿ ಪ್ರತಿಯನ್ನು ಪಡೆದುಕೊಳ್ಳಬಹುದಾಗಿದೆ.

**ವೇಳಾ ಪಟ್ಟಿ**

1. **ಆನ್ ಲೈನ್ ಅರ್ಜಿಯನ್ನು ತುಂಬಲು ನಿಗದಿಪಡಿಸಿದ ಪ್ರಾರಂಭಿಕ ದಿನಾಂಕಃ 23-03-2022**
2. **ಆನ್ ಲೈನ್ ಅರ್ಜಿ ಮತ್ತು ಶುಲ್ಕವನ್ನು ಸಲ್ಲಿಸಲು ಕೊನೆಯ ದಿನಾಂಕ: 22-04-2022**

*17. ಅರ್ಜಿ ಸಲ್ಲಿಸಲು ಪಾವತಿಸಬೇಕಾದ ಶುಲ್ಕ:*

| ಕ್ರ ಸಂ | ವಿವರ | ಒಂದು ಹುದ್ದೆಗೆ ಅರ್ಜಿ ಸಲ್ಲಿಸಿದಲ್ಲಿ ರೂ.ಗಳಲ್ಲಿ | ಎರಡು ಹುದ್ದೆಗೆ ಅರ್ಜಿ ಸಲ್ಲಿಸಿದಲ್ಲಿ ರೂ.ಗಳಲ್ಲಿ |
|---|---|---|---|
| 01 | ಪರಿಶಿಷ್ಠ ಜಾತಿ / ಪರಿಶಿಷ್ಠ ವರ್ಗ / ಪ್ರವರ್ಗ-1 /ಅಂಗವಿಕಲ ಅಭ್ಯರ್ಥಿಗಳಿಗೆ | 625 | 1250 |
| 02 | ಇತರೆ ಎಲ್ಲಾ ಅಭ್ಯರ್ಥಿಗಳಿಗೆ | 1250 | 2500 |

**ಅಭ್ಯರ್ಥಿಗಳು ಗಮನಿಸಬೇಕಾದ ಇತರೆ ಪ್ರಮುಖ ಅಂಶಗಳು :-**

*1.* ಪದವೀಧರ ಪ್ರಾಥಮಿಕ ಶಿಕ್ಷಕರ ನೇಮಕಾತಿ ಸ್ಪರ್ಧಾತ್ಮಕ ಪರೀಕ್ಷೆ – 2022: **ಸರ್ಕಾರಿ ಆದೇಶ ಸಂಖ್ಯೆ: ಇಪಿ 100, ಪಿಬಿಎಸ್ 2022 ಬೆಂಗಳೂರು ದಿ: 08.03.2022 ರಂತೆ** ಕಲ್ಯಾಣ ಕರ್ನಾಟಕ ಶೇಕಡಾ 80 ಸ್ಥಳೀಯ ವೃಂದದ ಹುದ್ದೆಗಳಿಗೆ ಹಾಗೂ ಕಲ್ಯಾಣ ಕರ್ನಾಟಕ ಶೇ.20 ಮಿಕ್ಕುಳಿದ ಹುದ್ದೆಗಳಿಗೆ ಮತ್ತು ಬೆಂಗಳೂರು ಬಿ.ಬಿ.ಎಂ.ಪಿ.ವ್ಯಾಪ್ತಿಯ ಕಲ್ಯಾಣ-ಕರ್ನಾಟಕ ರಾಜ್ಯ ಮಟ್ಟದ ಸ್ಥಳೀಯ ವೃಂದದ ಶೇಕಡಾ 8 ಹಾಗೂ ಶೇಕಡಾ

92 ಹುದ್ದೆಗಳಿಗೆ ಮತ್ತು ಇತರೆ ಜಿಲ್ಲೆಗಳ ಶೇಕಡಾ 100 ಹುದ್ದೆಗಳಿಗೆ ಒಂದೇ ಸ್ವರ್ಧಾತ್ಮಕ ಪರೀಕ್ಷೆಯನ್ನು ನಡೆಸಲಾಗುವುದು. ಇದು ಜಿಲ್ಲಾ ಹಂತದ ಸ್ಪರ್ಧಾತ್ಮಕ ಪರೀಕ್ಷೆಯಾಗಿದ್ದು, ರಾಜ್ಯಾದ್ಯಂತ ಏಕಕಾಲದಲ್ಲಿ ದಿನಾಂಕ: 21/05/2022 ಮತ್ತು 22/05/2022 ರಂದು ನಡೆಸಲಾಗುವುದು.

**ವಿಶೇಷ ಸೂಚನೆ**: ಸರ್ಕಾರಿ ಸುತ್ತೋಲೆ ಸಂಖ್ಯೆ ಸಿಆಸುಇ 3 ಹೈಕಕೋ 2018 ದಿನಾಂಕ: 06/06/2020 ರನ್ವಯ ಹೈದ್ರಾಬಾದ್ – ಕರ್ನಾಟಕ ಸ್ಥಳೀಯ ವ್ಯಕ್ತಿಗಳು ಸ್ಥಳೀಯ ಮತ್ತು ಮಿಕ್ಕುಳಿದ ವೃಂದದ ಹುದ್ದೆಗಳೆರಡಕ್ಕೂ ಅರ್ಜಿ ಸಲ್ಲಿಸಲು ಅರ್ಹರಿದ್ದು, ಎರಡೂ ವೃಂದದಲ್ಲಿನ ಒಂದೇ ಇಲಾಖೆಯ/ಪದನಾಮದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಂದ ಆಯ್ಕೆ ಆದ್ಯತೆಯನ್ನು ನಮೂದಿಸುವ ಬಗ್ಗೆ, ಆನ್ ಲೈನ್ ಅರ್ಜಿಯಲ್ಲಿ ಅವಕಾಶ ನೀಡಲಾಗುವುದು. ಒಂದು ವೇಳೆ ಸ್ಥಳೀಯ ಅಭ್ಯರ್ಥಿಯು ಮಿಕ್ಕುಳಿದ ವೃಂದದ ಹುದ್ದೆಯನ್ನು ಆಯ್ಕೆ ಮಾಡಿಕೊಂಡು ನೇಮಕಾತಿ ಹೊಂದಿದ್ದಲ್ಲಿ ಅಂಥಹ ಅಭ್ಯರ್ಥಿಗೆ ಜಾರಿಯಲ್ಲಿರುವ ನಿಯಮದಂತೆ ತನ್ನ ಸೇವಾವಧಿಯಲ್ಲಿ ಅನುಚ್ಛೇದ 371(ಜೆ) ಮೀಸಲಾತಿ ಸೌಲಭ್ಯವು ದೊರೆಯುವುದಿಲ್ಲ.

2. ಪ್ರತಿ ಹಂತದಲ್ಲಿಯೂ ಅವಶ್ಯಕ ವಿವರಗಳನ್ನು ಪೂರ್ಣವಾಗಿ ಭರ್ತಿ ಮಾಡಿದ ನಂತರದಲ್ಲಿ ತಪ್ಪದೆ Submit ಮಾಡಿ ಮುಂದಿನ ಹಂತದ ವಿವರಗಳನ್ನು ಭರ್ತಿ ಮಾಡುವುದು.
3. ಶೈಕ್ಷಣಿಕ ಹಾಗೂ ವೃತ್ತಿಪರ ಶಿಕ್ಷಣದ ಅಂಕ ವಿವರಗಳನ್ನು ಅಂಕಪಟ್ಟಿಯಲ್ಲಿರುವಂತೆ ಎಲ್ಲಾ ವರ್ಷಗಳ ಗರಿಷ್ಠ ಅಂಕಗಳು ಹಾಗೂ ಪಡೆದ ಅಂಕಗಳನ್ನು ನಿಗದಿತ ಅಂಕಣಗಳಲ್ಲಿ ಭರ್ತಿ ಮಾಡುವುದು.
4. ಕೆಲವು ವಿಶ್ವವಿದ್ಯಾಲಯಗಳ ಅಂಕಪಟ್ಟಿಗಳಲ್ಲಿ ಅಂಕಗಳಿಗೆ ಬದಲಾಗಿ ಗ್ರೇಡ್ ನಮೂದಿಸಲಾಗಿದ್ದು, ಅಂತಹ ಸಂದರ್ಭದಲ್ಲಿ ಸಂಬಂಧಪಟ್ಟ ವಿಶ್ವವಿದ್ಯಾಲಯದ ನಿಯಮಾನುಸಾರ ಗ್ರೇಡ್‌ನ್ನು ಅಂಕಗಳಿಗೆ ಪರಿವರ್ತಿಸಿ ನಿಗದಿತ ಅಂಕಣಗಳಲ್ಲಿ ಅಂಕಗಳನ್ನು ಭರ್ತಿ ಮಾಡುವುದು._ಸಂಬಂಧಿತ ಬೋರ್ಡ್/ವಿಶ್ವವಿದ್ಯಾನಿಲಯಗಳು ಗ್ರೇಡ್‌ನಿಂದ ಅಂಕಗಳಿಗೆ ಅಳವಡಿಸಲಾಗುವ ಅಂಕ ಪರಿವರ್ತನಾ ಪಟ್ಟಿಯನ್ನು ಸ್ಕ್ಯಾನ್ ಮಾಡಿ ಕಡ್ಡಾಯವಾಗಿ ಅಪ್‌ಲೋಡ್ ಮಾಡುವುದು. (Scan and upload conversion table from Grade to Marks)
5. ಕೆಲವು ವಿಶ್ವವಿದ್ಯಾಲಯಗಳಲ್ಲಿ ಕೆಲವು ವಿಷಯಗಳನ್ನು (ಉದಾ: Constitution of India, Computer Fundamental ಇತ್ಯಾದಿ) ಪರೀಕ್ಷಾ ಪೂರಕ ವಿಷಯವನ್ನಾಗಿ (Subsidiary Subject) ಅಧ್ಯಯನ ಮಾಡಬೇಕಾಗಿರುತ್ತದೆ. ಈ ವಿಷಯಗಳ ಅಂಕಗಳನ್ನು ವಿಶ್ವವಿದ್ಯಾಲಯವು ಒಟ್ಟು ಅಂಕಗಳಿಗೆ ಪರಿಗಣಿಸಿದ್ದಲ್ಲಿ, (ಪರಿಗಣಿಸಿರುವ ಬಗ್ಗೆ ಅಂಕಪಟ್ಟಿಯ Footnote ನಲ್ಲಿ ನಮೂದಿಸಿದ್ದಲ್ಲಿ ಮಾತ್ರ) ಆ ಅಂಕಗಳನ್ನು ಸೇರಿಸಿ ಆನ್‌ಲೈನ್ ಅರ್ಜಿಯಲ್ಲಿ ಭರ್ತಿ ಮಾಡುವುದು. ಪದವಿಯ/ಬಿ.ಇಡಿ ಯ ಎಲ್ಲಾ ವರ್ಷಗಳ/ ಸೆಮಿಸ್ಟರ್‌ಗಳ ಅಂಕಪಟ್ಟಿ ಗಳಲ್ಲಿ ನಮೂದಿಸಲಾದ ಗರಿಷ್ಠ ಅಂಕಗಳು (Maximum Marks) ಹಾಗೂ ಪಡೆದ ಅಂಕಗಳನ್ನು (Obtained Marks) ಪರಿಗಣಿಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಭರ್ತಿ ಮಾಡುವಾಗ ಹುದ್ದೆಗೆ ಪದವಿ/ ಬಿ.ಇಡಿ ಇನ್ನಿತರೆ ನಿಗದಿತ ಶೈಕ್ಷಣಿಕ ವಿದ್ಯಾರ್ಹತೆಯ ಅಂಕಪಟ್ಟಿಗಳಲ್ಲಿರುವ ಸೂಚನೆಗಳನ್ನು ಪರಿಗಣಿಸಿ ಗರಿಷ್ಠ/ಪಡೆದ ಅಂಕಗಳನ್ನು ಮತ್ತು ಶೇಕಡಾವಾರು ಅಂಕಗಳನ್ನು ಲೆಕ್ಕಾಚಾರ ಮಾಡಿ ಆನ್‌ಲೈನ್ ಅರ್ಜಿಯಲ್ಲಿ ನಮೂದಿಸ ಬೇಕು.

6. **ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಿದ ಅಭ್ಯರ್ಥಿಯ ಎಲ್ಲಾ ವಿವರಗಳು ಸಮರ್ಪಕವಾಗಿದೆ ಎಂದು ದೃಢಪಡಿಸಿಕೊಂಡು ಘೋಷಣೆ ನೀಡಿದ ನಂತರದಲ್ಲಿ ಯಾವುದೇ ಬದಲಾವಣೆಗೆ ಅವಕಾಶ ಇರುವುದಿಲ್ಲ.**

7. ಅರ್ಜಿಯಲ್ಲಿ ನಮೂದಿಸಿರುವ ಐಚ್ಛಿಕ ವಿಷಯಗಳು ನೇಮಕಾತಿ ಮತ್ತು ವೃಂದ ನಿಯಮಗಳು, ನೇಮಕಾತಿ ಅಧಿಸೂಚನೆ ಮತ್ತು ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಬೋಧಿಸುವ ಪಠ್ಯಕ್ರಮವನ್ನು ಆಧರಿಸಿದೆ. ಆದ್ದರಿಂದ ವಿಷಯಗಳ ಆಯ್ಕೆಗೆ ಸಂಬಂಧಿಸಿದಂತೆ ಸೂಚಿಸಲಾದ ವಿಷಯಗಳನ್ನು ಹೊರತುಪಡಿಸಿ ಉಳಿದ ವಿಷಯಗಳನ್ನು ಅಭ್ಯಸಿಸಿರುವ ಅಭ್ಯರ್ಥಿಗಳಿಗೆ ಅವಕಾಶವಿರುವುದಿಲ್ಲ. **ಈ ಸಂಬಂದ ಸಿಎಸಿ ಯನ್ನು ಸಂಪರ್ಕಿಸಬಾರದಾಗಿ** ತಿಳಿಸಿದೆ.

8. ಜಾತಿ, ಆದಾಯ ಪ್ರಮಾಣ ಪತ್ರ ಮತ್ತು ಹೈ.ಕ.ಮೀಸಲಾತಿ 371(ಜೆ) ಗೆ ಸಂಬಂಧಿಸಿದ ಮೀಸಲಾತಿಯ ಪ್ರಮಾಣ ಪತ್ರಗಳ ಆರ್.ಡಿ ನಂಬರ್‌ನ್ನು ನಮೂದಿಸಿದಲ್ಲಿ ಮಾತ್ರ ಸಂಬಂಧಿಸಿದ ಮೀಸಲಾತಿಯನ್ನು ಪರಿಗಣಿಸಲಾಗುವುದು.

9. ಪರೀಕ್ಷಾ ಪ್ರವೇಶ ಪತ್ರವನ್ನು ಪಡೆಯಲು ಮುಂದಿನ ದಿನಾಂಕದಲ್ಲಿ ಇಲಾಖಾ ವೆಬ್‌ಸೈಟ್ (www.schooleducation.kar.nic.in) ಅಥವಾ ದಿನಪತ್ರಿಕೆಯಲ್ಲಿ ಪ್ರಕಟಿಸಲಾಗುವ ನಿಗದಿತ ದಿನಾಂಕದಂದು ನೋಂದಣಿ ಸಂಖ್ಯೆ ಮತ್ತು ಜನ್ಮ ದಿನಾಂಕ ನಮೂದಿಸಿ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಪ್ರವೇಶ ಪತ್ರವನ್ನು ಬೇರೆ ಯಾವುದೇ ಮೂಲದಿಂದ ಪಡೆಯಲು ಅವಕಾಶವಿರುವುದಿಲ್ಲ. ಪ್ರವೇಶ ಪತ್ರವಿಲ್ಲದ ಅಭ್ಯರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಅವಕಾಶವಿರುವುದಿಲ್ಲ.

10. ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 6–8ನೇ ತರಗತಿಗಳಿಗೆ ಬೋಧಿಸಲು ಅರ್ಜಿ ಸಲ್ಲಿಸುವ ಅಭ್ಯರ್ಥಿಯು, ಪೇಪರ್–2 ಪತ್ರಿಕೆಯನ್ನು, ಯಾವ ಬೋಧನಾ ಮಾಧ್ಯಮದ ಹುದ್ದೆಗೆ ಆಯ್ಕೆ ಬಯಸುತ್ತಾರೋ, ಆ ಭಾಷಾ ಮಾಧ್ಯಮದಲ್ಲಿ ಅಥವಾ ಆಂಗ್ಲ ಭಾಷೆಯಲ್ಲಿ ಉತ್ತರಿಸಬೇಕು ಹಾಗೂ ಎಲ್ಲಾ ಪ್ರಶ್ನೆಗಳಿಗೆ ಕಡ್ಡಾಯವಾಗಿ ಆಯ್ದ ಒಂದೇ ಭಾಷೆಯಲ್ಲಿ ಉತ್ತರಿಸಬೇಕು. ಇಲ್ಲದಿದ್ದಲ್ಲಿ ಅಂತಹ ಅಭ್ಯರ್ಥಿಗಳ ಉತ್ತರ ಪತ್ರಿಕೆಗಳನ್ನು ಮೌಲ್ಯಮಾಪನಕ್ಕೆ ಪರಿಗಣಿಸಲಾಗುವುದಿಲ್ಲ.

11. ಅಭ್ಯರ್ಥಿಗಳು ಓ.ಎಂ.ಆರ್ ಮತ್ತು ಉತ್ತರ ಪತ್ರಿಕೆಯಲ್ಲಿ ತುಂಬಬೇಕಾದ ಮಾಹಿತಿಗಳನ್ನು ಕಡ್ಡಾಯವಾಗಿ ಭರ್ತಿ ಮಾಡಬೇಕು ಹಾಗೂ ಅಭ್ಯರ್ಥಿಯ ಸಹಿ, ಹೆಬ್ಬೆಟ್ಟು ಇವುಗಳು ಇಲ್ಲದಿದ್ದಲ್ಲಿ ಅಂತಹ ಓ.ಎಂ.ಆರ್‌ಗಳನ್ನು ಮೌಲ್ಯಮಾಪನಕ್ಕೆ ಪರಿಗಣಿಸಲಾಗುವುದಿಲ್ಲ.

12. ಅಭ್ಯರ್ಥಿಗಳು ಒಂದೇ ಜಿಲ್ಲೆಯಲ್ಲಿ ಒಂದಕ್ಕಿಂತ ಹೆಚ್ಚು ಅರ್ಜಿ ಸಲ್ಲಿಸಿದ್ದಲ್ಲಿ ಯಾವ ನೋಂದಣಿ/ಅರ್ಜಿ ಸಂಖ್ಯೆಯಲ್ಲಿ ಪರೀಕ್ಷೆ ತೆಗೆದುಕೊಂಡಿರುತ್ತಾರೋ ಆ ಅರ್ಜಿಯನ್ನು ಮಾತ್ರ ಅಂತಿಮವಾಗಿ ಪರಿಗಣಿಸಲಾಗುವುದು.. ಆದರೆ ಅಭ್ಯರ್ಥಿಯು ಎಲ್ಲಾ ಪತ್ರಿಕೆಗಳನ್ನು ಒಂದೇ ನೊಂದಣಿ/ಅರ್ಜಿ ಸಂಖ್ಯೆಯಲ್ಲಿ ಉತ್ತರಿಸಿರಬೇಕು.

13. ಅಭ್ಯರ್ಥಿಯು ಒಂದೇ ಅರ್ಜಿಯಲ್ಲಿ ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಿದಲ್ಲಿ, ಆ ಎರಡೂ ಹುದ್ದೆಗಳಿಗೆ ಯಾವುದಕ್ಕೆ ಪ್ರಥಮ ಹಾಗೂ ದ್ವಿತೀಯ ಆದ್ಯತೆ ಬಯಸುವರು ಎಂಬುದನ್ನು ಕಡ್ಡಾಯವಾಗಿ ನಮೂದಿಸಬೇಕು.

14. ಅರ್ಜಿ ಶುಲ್ಕ ಪಾವತಿಸಿದ ನಂತರ ಅಭ್ಯರ್ಥಿಯು ಅರ್ಜಿಯ ಮುದ್ರಿತ ಪ್ರತಿಯನ್ನು ಪಡೆದುಕೊಳ್ಳುವುದು. ಮುದ್ರಿತ ಅರ್ಜಿಯಲ್ಲಿನ ಅರ್ಜಿ ಸಂಖ್ಯೆ ಈ ನೇಮಕಾತಿಯ ಮುಂದಿನ ಎಲ್ಲಾ ಪ್ರಕ್ರಿಯೆಗಳಿಗೆ ಅವಶ್ಯಕವಾಗಿರುವುದರಿಂದ ಅರ್ಜಿಯ ಸಂಖ್ಯೆಯನ್ನು/ಮುದ್ರಿತ ಅರ್ಜಿ ಪ್ರತಿಯನ್ನು ಅಭ್ಯರ್ಥಿಯು ಕಡ್ಡಾಯವಾಗಿ ಅತ್ಯಂತ ಜಾಗರೂಕತೆಯಿಂದ ಸಂರಕ್ಷಿಸಿಕೊಳ್ಳಬೇಕು.

15. ಶಿಕ್ಷಕರ ಅರ್ಹತಾ ಪರೀಕ್ಷೆಯಲ್ಲಿ (ಕೆ.ಎ.ಆರ್.ಟಿ.ಇ.ಟಿ/ಸಿ.ಟಿ.ಇ.ಟಿ–ಪೇಪರ್–2ರಲ್ಲಿ – ಸಾಮಾನ್ಯ, 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ಶೇಕಡಾ 60 ಹಾಗೂ ಪ–ಜಾತಿ, ಪ–ವರ್ಗ, ಪ್ರವರ್ಗ–1 ಮತ್ತು

ವಿಕಲಚೇತನ ಗುಂಪಿಗೆ ಸೇರಿದ ಅಭ್ಯರ್ಥಿಗಳು ಶೇಕಡಾ 55 ಅಂಕಗಳನ್ನು ಗಳಿಸಿರಬೇಕು) ಅರ್ಹತೆ ಗಳಿಸಿರಬೇಕು.

**16.** ಆನ್‌ಲೈನ್ ಮೂಲಕ ಅರ್ಜಿಯನ್ನು ಭರ್ತಿಮಾಡುವ ಸಂದರ್ಭದಲ್ಲಿ ತಾಂತ್ರಿಕ ತೊಂದರೆ ಅಥವಾ ಪರೀಕ್ಷಾ ಸಂಬಂಧಿತ ಸಮಸ್ಯೆ ಎದುರಾದಲ್ಲಿ ಈ ಕೆಳಕಂಡ ಸ್ಥಿರ ದೂರವಾಣಿ ಸಂಖ್ಯೆಗಳ ಮೂಲಕ ಸಂಪರ್ಕಿಸಿ ಅಗತ್ಯ ಮಾಹಿತಿಯನ್ನು ಪಡೆಯಬಹುದಾಗಿದೆ.

**ದೂರವಾಣಿ ಸಂಖ್ಯೆಗಳು: 080–22483140, 080–22483145 ಮತ್ತು 080–22228805.**

ಸಹಿ/–

ವಿಶೇಷಾಧಿಕಾರಿ